**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21** **ದಿನಾಂಕ : 09–11–2020**

# ಮಾಧ್ಯಮ ಆಮಂತ್ರಣ

## ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರ ಉಪಚುನಾವಣೆಯ ಮತ ಎಣಿಕೆ

**ಬೆಂಗಳೂರು, ನವೆಂಬರ್ 09 (ಕರ್ನಾಟಕ ವಾರ್ತೆ): ನವೆಂಬರ್ 3 ರಂದು ನಡೆದ ರಾಜರಾಜೇಶ್ವರಿ ನಗರದ ವಿಧಾನಸಭೆ ಕ್ಷೇತ್ರದ ಉಪ ಚುನಾವಣೆಯ ಮತ ಎಣಿಕೆ ನಾಳೆ ನಡೆಯಲಿದ್ದು, ಈ ಕುರಿತು ಇಂದು** ನಗರ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಮಾನ್ಯ ಆಯುಕ್ತರು ಮತ್ತು ಮಾನ್ಯ ನಗರ ಪೋಲಿಸ್ ಆಯುಕ್ತರು ರವರಿಂದ ಜಂಟಿ ಮಾಧ್ಯಮ ಗೋಷ್ಠಿ **ಹಮ್ಮಿಕೊಂಡಿದ್ದರು.**

*ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರ-154ರ ಉಪಚುನಾವಣೆಯ ಮತ ಎಣಿಕೆ ಸಿದ್ಧತೆಗೆ ಸಂಬಂಧಿಸಿದಂತೆ ಮಾನ್ಯ ಬೆಂಗಳೂರು ನಗರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಪಾಲಿಕೆ ಆಯುಕ್ತರು ಮತ್ತು ಮಾನ್ಯ ನಗರ ಪೋಲಿಸ್ ಆಯುಕ್ತರು ರವರು ಇಂದು ಜ್ಞಾನಾಕ್ಷಿ ವಿದ್ಯಾನಿಕೇತನ್ ಶಾಲೆ(ಮತ ಎಣಿಕೆ ಕೇಂದ್ರ)ಯಲ್ಲಿ ಜಂಟಿ ಮಾಧ್ಯಮ ಗೋಷ್ಠಿ ನಡೆಸಿದರು. ಈ ವೇಳೆ ವಿಶೇಷ ಆಯುಕ್ತರು ಶ್ರೀ ಜೆ.ಮಂಜುನಾಥ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.*

ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರ ಉಪಚುನಾವಣೆ ಮತ ಎಣಿಕೆ ಕಾರ್ಯಕ್ಕೆ ಎಲ್ಲಾ ರೀತಿಯ ಸಿದ್ದತೆಗಳನ್ನು ಮಾಡಿಕೊಳ್ಳಲಾಗಿದ್ದು, ನಾಳೆ ಬೆಳಗ್ಗೆ 8 ಗಂಟೆಗೆ ಎಣಿಕೆ ಕಾರ್ಯ ಪ್ರಾರಂಭವಾಗಲಿದೆ. ಚುನಾವಣೆಯಲ್ಲಿ 16 ಜನ ಅಭ್ಯರ್ಥಿಗಳು ಸ್ಪರ್ಧಿಸಿದ್ದು, ಒಟ್ಟು 4,62,236 ಮತದಾರರಲ್ಲಿ 2,09,828(ಶೇ.45.48) ಮತದಾರು ಮತದಾನ ಮಾಡಿದ್ದಾರೆ ಎಂದು ನಗರ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಆಯುಕ್ತರು ತಿಳಿಸಿದರು.

ಮತ ಎಣಿಕೆಯ ಸಿಬ್ಬಂದಿ 3 ವಿಧದಲ್ಲಿದ್ದು, ಪ್ರತಿ ಟೇಬಲ್ ಗೆ ಮೈಕ್ರೋ ಅಬ್ಸರ್ ವರ್, ಮತ ಎಣಿಕೆ ಮೇಲ್ವಿಚಾರಕರು ಮತ್ತು ಮತ ಎಣಿಕೆ ಸಹಾಯಕರನ್ನು ನಿಯೋಜನೆ ಮಾಡಲಾಗಿದೆ. ಮತ ಎಣಿಕೆ ಸಿಬ್ಬಂದಿ ಹಾಗೂ ಅಭ್ಯರ್ಥಿಗಳ ಮತ ಎಣಿಕೆ ಏಜೆಂಟ್ ಗಳನ್ನು ಬೆಳಗ್ಗೆ 7 ಗಂಟೆಗೆ ಬರಲು ತಿಳಿಸಲಾಗಿದೆ. ಯಾರಿಗೆ ಗುರುತಿನ ಚೀಟಿ ನೀಡಲಾಗಿದೆ

ಅಂತಹವರಿಗೆ ಮಾತ್ರ ಮತ ಎಣಿಕೆ ಕೇಂದ್ರದ ಒಳಗೆ ಬಿಡಲಾಗುತ್ತದೆ. ಎಣಿಕೆ ಕಾರ್ಯವು 4 ಕೊಠಡಿಗಳಲ್ಲಿ 28 ಎಣಿಕಾ ಟೇಬಲ್ ಗಳನ್ನು ವ್ಯವಸ್ಥೆ ಮಾಡಿದ್ದು, ಹೆಚ್ಚುವರಿಯಾಗಿ 3 ಸಹಾಯಕ ಚುನಾವಣಾಧಿಕಾರಿಗಳನ್ನು ಎಣಿಕೆ ಕಾರ್ಯಕ್ಕಾಗಿ ನಿಯೋಜನೆ ಮಾಡಿಕೊಳ್ಳಲಾಗಿದೆ. ಎಣಿಕೆ ಕಾರ್ಯದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗೆ 2 ಹಂತದ ತರಬೇತಿ ನೀಡಲಾಗಿದೆ ಎಂದು ಹೇಳಿದರು.

ಎಣಿಕೆ ಕಾರ್ಯಕ್ಕೆ ನಿಯೋಜನೆ ಮಾಡಿರುವ ಸಿಬ್ಬಂದಿಗೆ ಮತ ಎಣಿಕೆ ಕೇಂದ್ರಕ್ಕೆ ಬರುವವರೆಗೆ ಯಾವ ಟೇಬಲ್ ನಲ್ಲಿ ಕೂರಲಿದ್ದೇವೆ ಎಂಬುದು ತಿಳಿದಿರುವುದಿಲ್ಲ. ನಾಳೆ ಬೆಳಗ್ಗೆ ಬಂದ ಬಳಿಕ ತಿಳಿಯಲಿದ್ದು, 7.45ಕ್ಕೆ ಸ್ಟ್ರಾಂಗ್ ರೂಂಗಳನ್ನು ತೆರೆಯಲಾಗುತ್ತದೆ. 8ಕ್ಕೆ ಪೋಸ್ಟಲ್ ಬ್ಯಾಲೆಟ್ ಗಳ ಎಣಿಕೆ ಪ್ರಾರಂಭವಾಗಲಿದ್ದು, 8.30ಕ್ಕೆ ಇ.ವಿ.ಎಂ ಎಣಿಕೆ ಪ್ರಾರಂಭವಾಗಲಿದೆ. 25 ಸುತ್ತುಗಳಲ್ಲಿ ಎಣಿಕೆ ಕಾರ್ಯ ನಡೆಯಲಿದೆ. ಅಲ್ಲದೆ ಚುನಾವಣಾ ಆಯೋಗದ ನಿರ್ದೇಶನದಂತೆ  ಇ.ವಿ.ಎಂ ಎಣಿಕೆ ಮುಗಿದ ನಂತರ 1 ಮತಗಟ್ಟೆಯ ವಿ.ವಿ.ಪ್ಯಾಟ್ ಅನ್ನು ಚುನಾವಣಾ ವೀಕ್ಷಕರು ಆರಿಸಲಿದ್ದು, 4 ಮತಗಟ್ಟೆಗಳ ವಿ.ವಿ.ಪ್ಯಾಟ್ ಗಳನ್ನು ಚುನಾವಣಾ ಅಭ್ಯರ್ಥಿಗಳು ಆರಿಸಲಿದ್ದಾರೆ. ಆ  5 ಮತಗಟ್ಟೆಗಳ ವಿ.ವಿ.ಪ್ಯಾಟ್ ಗಳಲ್ಲಿರುವ ಸ್ಲಿಪ್ ಎಣಿಕೆ ಕಾರ್ಯ ಮಾಡಲಾಗುತ್ತದೆ  ಎಂದು ತಿಳಿಸಿದರು.

ಮತ ಎಣಿಕೆ ಕಾರ್ಯದಲ್ಲಿ ಕಾರ್ಯ ನಿರ್ವಹಿಸುವ ಯಾವುದೇ ಸಿಬ್ಬಂದಿ ಎಣಿಕೆ ಕೇಂದ್ರದಲ್ಲಿ ಮೊಬೈಲ್/ಬ್ಯಾಗ್ ತರುವ ಹಾಗಿಲ್ಲ. ಏಜೆಂಟ್ ಗಳು ಕೂಡ ತರಲು ಅವಕಾಶವಿಲ್ಲ. ಮಾಧ್ಯಮದವರಿಗೆ ಮಾಧ್ಯಮ ಕೇಂದ್ರದ ವ್ಯವಸ್ಥೆ ಮಾಡಿದ್ದು, ಮಾಧ್ಯಮ ಕೇಂದ್ರಕ್ಕೆ ಮಾತ್ರ ಮೊಬೈಲ್ ಬಳಸಲು ಅವಕಾಶವಿರುತ್ತದೆ. ಕೋವಿಡ್ ಮುಂ ಜಾಗ ಕ್ರಮವಾಗಿ ಪ್ರತಿಯೊಬ್ಬರೂ ಕೂಡ ಮಾಸ್ಕ್ ಧರಿಸಬೇಕು. ಹ್ಯಾಂಡ್ ಸ್ಯಾನಿಟೈಸರ್ ಹಾಗೂ ಥರ್ಮಲ್ ಸ್ಕ್ಯಾನಿಂಗ್ ವ್ಯವಸ್ಥೆ ಮಾಡಲಾಗುತ್ತದೆ. ಸಾಮಾಜಿಕ ಅಂತರ ಕೂಡ ಕಟ್ಟುನಿಟ್ಟಾಗಿ ಪಾಲನೆ ಮಾಡಲಾಗುತ್ತದೆ. ಅಭ್ಯರ್ಥಿಗಳ ಏಜೆಂಟ್ ಗಳು ಅಶಿಸ್ತು ತೋರಿದರೆ ಮುಲಾಜಿಲ್ಲದೆ ಹೊರಗಡೆ ಕಳುಹಿಸುತ್ತೇವೆ ಎಂದರು.

*ಬೆಂಗಳೂರು ನಗರ ಪೊಲೀಸ್ ಆಯುಕ್ತರು ಕಮಲ್ ಪಂತ್ ಮಾತನಾಡಿ, ರಾಜರಾಜೇಶ್ವರಿ ನಗರದಲ್ಲಿ ಚುನಾವಣಾ ಪ್ರಕ್ರಿಯೆ ಶಾಂತ ರೀತಿಯಲ್ಲಿ ನಡೆದಿದ್ದು, ಇಂದು ಸ್ಟ್ರಾಂಗ್ ರೂಂ ಪರಿಶೀಲನೆ ನಡೆಸಲಾಗಿದೆ. ಮತ ಎಣಿಕೆ ಕೇಂದ್ರದಲ್ಲಿ ಒಟ್ಟು 4 ಹಂತದ ವ್ಯವಸ್ಥೆ ಮಾಡಲಾಗಿದ್ದು, ಎಲ್ಲಾ ರೀತಿಯ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಮತ ಎಣಿಕೆ ಕೇಂದ್ರದ ಎರಡೂ ಕಡೆಯ 100 ಮೀಟರ್ ವ್ಯಾಪ್ತಿಯಲ್ಲಿ ನಿಬಂಧನೆಯಿರಲಿದ್ದು, ಚುನಾವಣಾ ಆಯೋಗದಿಂದ ಪಾಸ್ ಪಡೆದವರಿಗೆ ಮಾತ್ರ ಒಳಗೆ ಅವಕಾಶ ನೀಡಲಾಗುತ್ತದೆ. ಮುಖ್ಯ ದ್ವಾರದಲ್ಲಿ ಹೆಚ್ಚು ಪೊಲೀಸ್ ಭದ್ರತೆ ಇರಲಿದ್ದು, ಗುರುತಿನ ಚೀಟಿ ಪರಿಶೀಲನೆ ಮಾಡಿದ ಬಳಿಕ ಮತ ಎಣಿಕೆ ಕೇಂದ್ರದ ಒಳಗೆ ಕಳುಹಿಸಲಾಗುತ್ತದೆ ಎಂದರು.

ಮತ ಎಣಿಕೆ ಕೇಂದ್ರದಲ್ಲಿ 1 ಡಿ.ಸಿ.ಪಿ, 4 ಎ.ಸಿ.ಪಿ, 20 ಪಿ.ಐ, 48 ಪಿ.ಐ.ಸಿ, 76 ಎ.ಎಸ್.ಐ, 360 ಹೆಚ್.ಸಿ/ಪಿ.ಸಿ, 83 ಮಪ್ತಿ ಸೇರಿ 592 ಹಾಗೂ ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರದಲ್ಲಿ 899 ಸೇರಿದಂತೆ ಒಟ್ಟು 1,670 ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿದೆ. 36 ಕೆ.ಎಸ್.ಆರ್.ಪಿ/ಸಿ.ಎ.ಆರ್ ಇರಲಿದ್ದಾರೆ. ಈ ಭಾಗದಲ್ಲಿ ಯಾವುದೇ ಅಹಿತಕರ ಘಟನೆ  ನಡೆಯದಂತೆ ಈಗಾಗಲೇ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ನಾಳೆ ಬೆಳಗ್ಗೆ 6 ರಿಂದ ಮಧ್ಯರಾತ್ರಿ

12 ಗಂಟೆಯವರೆಗೆ ಈ ಕ್ಷೇತ್ರದಲ್ಲಿ ಹೆಚ್ಚು ಜನ, ಕಾರ್ಯಕ್ರಮ ನಡೆಯುವ ಹಾಗಿಲ್ಲ. ಅಲ್ಲದೆ ಈ ಕ್ಷೇತ್ರದಲ್ಲಿ ಮದ್ಯವನ್ನು ಕೂಡಾ ನಿಷೇಧಿಸಿರಲಾಗಿರುತ್ತದೆ. ಕೋವಿಡ್ ಇರುವ ಪರಿಣಾಮ ಮತ ಎಣಿಕೆ ಕೇಂದ್ರದ ಬಳಿ ಹೆಚ್ಚು ಜನ ಸೇರುವಂತಿಲ್ಲ. ಜೊತೆಗೆ ಯಾರೂ ಕೂಡ ಸಂಭ್ರಮಾಚರಣೆ/ಪಟಾಕಿ ಹಚ್ಚುವ ಹಾಗಿಲ್ಲ. ಯಾರಾರದು ಮಾಡಿದಲ್ಲಿ ಕಾನೂನು ರೀತಿಯ ಕ್ರಮ ಕೈಗೊಳ್ಳಲಾಗುತ್ತದೆ. ಮತ ಎಣಿಕೆ ಕೇಂದ್ರದ ರಸ್ತೆ ಮಾರ್ಗದಲ್ಲಿ ವಾಹನ ಸಂಚಾರ ವ್ಯವಸ್ಥೆ ಇರುವುದಿಲ್ಲ. ವಾಹನ ಸಂಚಾರಕ್ಕಾಗಿ ಪರ್ಯಾಯ ವ್ಯವಸ್ಥೆ ಕಲ್ಪಿಸಲಾಗುತ್ತದೆ ಎಂದು ತಿಳಿಸಿದರು.

# ಸಚಿವರ ಪ್ರವಾಸ

**ಬೆಂಗಳೂರು, ನವೆಂಬರ್ 09 (ಕರ್ನಾಟಕ ವಾರ್ತೆ):**

ವಸತಿ ಸಚಿವ ವಿ. ಸೋಮಣ್ಣ ಅವರು ನವೆಂಬರ್ 13 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಅಧಿಕಾರ ಸ್ವೀಕಾರ

**ಬೆಂಗಳೂರು, ನವೆಂಬರ್ 09 (ಕರ್ನಾಟಕ ವಾರ್ತೆ):**

ಡಾ॥ ಎಲ್. ಗೋಮತಿ ದೇವಿಯವರು, ಇಂದು ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು, ಇಲ್ಲಿಗೆ ಪ್ರಥಮ ಉಪ-ಕುಲಪತಿಗಳಾಗಿ ಅಧಿಕಾರ ಸ್ವೀಕರಿಸಿರುತ್ತಾರೆ.

ಡಾ॥ ಎಲ್. ಗೋಮತಿ ದೇವಿಯವರು ಬೆಂಗಳೂರು ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ಪಿ.ಹೆಚ್.ಡಿ ಗಳಿಸಿದ್ದು, ಮೂರು ದಶಕಗಳಿಗೂ ಮೀರಿದ ಉಜ್ವಲ ಮತ್ತು ಉತ್ಕೃಷ್ಟ ವೃತ್ತಿ ಜೀವನವನ್ನು ಹೊಂದಿರುತ್ತಾರೆ. ಸದರಿಯವರು ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿದ್ದು, ಸರ್ ಸಿ. ವಿ. ರಾಮನ್ ಪ್ರಶಸ್ತಿ, ಕರ್ನಾಟಕ ಸರ್ಕಾರದಿಂದ ದತ್ತವಾದ ಅತ್ಯುತ್ತಮ ಸಂಶೋಧನಾ ಪ್ರಕಾಶನ ಪ್ರಶಸ್ತಿ ಮತ್ತು ಭಾರತೀಯ ರಸಾಯಾನ ವಿಜ್ಞಾನಿಗಳ ಪರಿಷತ್ತಿನ ಅತ್ಯುತ್ತಮ ಮಹಿಳಾ ವಿಜ್ಞಾನಿ ಪ್ರಶಸ್ತಿಗಳನ್ನು ಪಡೆದಿದ್ದಾರೆ.

ಇವರು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯದ ಪ್ರಥಮ ಉಪ-ಕುಲಪತಿಗಳಾಗಿ ನೇಮಕಗೊಳ್ಳುವ ಮುನ್ನ, ಬೆಂಗಳೂರು ವಿಶ್ವವಿದ್ಯಾಲಯದ ರಸಾಯಾನಿಕ ಶಾಸ್ತ್ರ ವಿಭಾಗದಲ್ಲಿ, ಎರಡು ದಶಕಗಳ ಕಾಲ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಛಾಯಚಿತ್ರ ಲಗತ್ತಿಸಿದೆ)

**Dr.L.Gomathi Devi today assumed office as the First Vice-Chancellor of Maharani Cluster University, Bengaluru.**

**Bengaluru, November 11 (Karnataka Informaiton)**

Dr.L.Gomathi Devi has illustrious, distinguished and brilliant academic career spanning more than three decades, and is an alumnus of Indian Institute of Science, Bengaluru. She is a recipient of several awards and recognitions including the Sir C V Raman award, Best research publication award from Government of Karnataka and Best Woman Scientist award from Indian Council of Chemists.

She has served in the Department of Chemistry, Bangalore University, as Professor for more than two decades, prior to this appointment says official press release .

Photo enclosed)

## ಎಸಿಬಿ ದಾಳಿ

**ಬೆಂಗಳೂರು, ನವೆಂಬರ್ 9 (ಕರ್ನಾಟಕ ವಾರ್ತೆ):**

ಡಾ.ಬಿ.ಸುಧಾ (ಕೆ.ಎ.ಎಸ್) ಆಡಳಿತಾಧಿಕಾರಿ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಇಲಾಖೆ, ಶಾಂತಿನಗರ, ಬೆಂಗಳೂರು ರವರ ವಿರುದ್ಧ ಅಕ್ರಮ ಆಸ್ತಿಗಳ ಗಳಿಕೆ ಸಂಬಂಪಟ್ಟಂತೆ ದಿನಾಂಕ: 07.11.2020 ರಂದು ಬೆಂಗಳೂರು, ಮೈಸೂರು ಹಾಗೂ ಉಡುಪಿ ಜಿಲ್ಲೆಯ ಒಟ್ಟು 7 ಸ್ಥಳಗಳಲ್ಲಿ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿ ಹಾಗೂ ಸಿಬ್ಬಂದಿಯವರ 6 ವಿವಿಧ ತಂಡಗಳಂದ ಶೋಧನೆ ಕಾರ್ಯವನ್ನು ಕೈಗೊಳ್ಳಲಾಗಿದೆ.

ಶೋಧನಾ ಕಾಲದಲ್ಲಿ ಈ ಕೆಳಕಂಡಂತೆ ಚರ ಮತ್ತು ಸ್ಥಿರಾಸ್ತಿಗಳು ಪತ್ತೆಯಾಗಿದ್ದು ಇವುಗಳ ಬಗ್ಗೆ ತನಿಖೆ ಮುಂದುವರೆದಿರುತ್ತದೆ.

1. ಆರೋಪಿತರು ಮತ್ತು ಅವರ ಕುಟುಂಬ ಸದಸ್ಯರು ಹಾಗು ಅವರಿಗೆ ಪರಿಚಯವಿರುವ ಇತರೆ ವ್ಯಕ್ತಿಗಳ ಹೆಸರಿನಲ್ಲಿರುವ ಸುಮಾರು 200ಕ್ಕೂ ಹೆಚ್ಚು ಸ್ವತ್ತಿಗೆ ಸಂಬಂಧಪಟ್ಟ ದಾಖಲಾತಿಗಳು, ಆಸ್ತಿಗಳ ಕ್ರಯ ಪತ್ರಗಳು, ಜಿಪಿಎ ಪತ್ರಗಳು, ಕೆಲವು ಒಪ್ಪಂದದ ಕರಾರು ಪತ್ರಗಳು ಮತ್ತು ಇತರೆ ದಾಖಲಾತಿಗಳು ದೊರೆತ್ತಿರುತ್ತವೆ.
2. ಆರೋಪಿತರು ಮತ್ತು ಬೇರೆ ವ್ಯಕ್ತಿಗಳ ಹೆಸರಿನಲ್ಲಿ ವಿವಿಧ ಬ್ಯಾಂಕ್‌ಗಳಲ್ಲಿ ಸುಮಾರು 50 ಬ್ಯಾಂಕ್ ಖಾತೆಗಳ ವಿವರಗಳು, ಸುಮಾರು 50 ಕ್ಕೂ ಅಧಿಕ ಚೆಕ್ ಲೀಫ್‌ಗಳು ದೊರೆತಿರುತ್ತೇವೆ.
3. ಆರೋಪಿತರು ಮತ್ತು ಅವರೊಂದಿಗೆ ವ್ಯವಹಾರದ ಸಂಬಂಧ ಸಂಪರ್ಕದಲ್ಲಿರುವ ವ್ಯಕ್ತಿಗಳ ಮನೆಯಲ್ಲಿ ರೂ. 36,89,000/- ನಗದು ಹಣ ದೊರೆತಿರುತ್ತದೆ.
4. ಆರೋಪಿ ಡಾ||.ಬಿ.ಸುಧಾ ರವರು ಮತ್ತು ಅವರಿಗೆ ಸಂಬಂಧಪಟ್ಟ ಇತರೆ ವ್ಯಕ್ತಿಗಳ ಬ್ಯಾಂಕ್‌ಖಾತೆಗಳಲ್ಲಿ ಸುಮಾರು 3.5 ಕೋಟಿ ರೂ.ಗಳು ಠೇವಣಿಗಳು ಪತ್ತೆಯಾಗಿರುತ್ತದೆ.
5. ಆರೋಪಿತರು ಮತ್ತು ಅವರಿಗೆ ಸಂಬಂಧಪಟ್ಟ ಇತರೆ ವ್ಯಕ್ತಿಗಳ ಮನೆಯಲ್ಲಿ ಸುಮಾರು 3.7 ಕೆ.ಜಿ ಚಿನ್ನಾಭರಣಗಳು ಮತ್ತು ಸುಮಾರು 10.5 ಕೆ.ಜಿ ಗಳು ಬೆಳ್ಳಿಯ ವಸ್ತಗಳು ಪತ್ತೆಯಾಗಿರುತ್ತದೆ.

ಪ್ರಕರಣಕ್ಕೆ ಸಂಬಂಧಪಟ್ಟಂತೆ ದಾಖಲೆಗಳ ಪರಿಶೀಲನಾ ಕಾರ್ಯ ಕೈಗೊಂಡಿದ್ದು, ಪ್ರಕರಣದಲ್ಲಿ ತನಿಖೆ ಮುಂದುವರೆದಿರುತ್ತದೆ.

## ಕರ್ನಾಟಕ ಮಾಧ್ಯಮ ಅಕಾಡೆಮಿ
## ಪತ್ರಿಕೋದ್ಯಮ ಸ್ನಾತಕೋತ್ತರ ಪದವೀಧರರಿಗೆ
## ತರಬೇತಿಗಾಗಿ ಅರ್ಜಿ ಆಹ್ವಾನ

**ಬೆಂಗಳೂರು, ನವೆಂಬರ್ 9 (ಕರ್ನಾಟಕ ವಾರ್ತೆ):**

ಕರ್ನಾಟಕ ಮಾಧ್ಯಮ ಅಕಾಡೆಮಿಯ 2020-21ನೇ ಸಾಲಿನ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿಯಲ್ಲಿ (ಎಸ್.ಸಿ.ಪಿ./ ಟಿ.ಎಸ್.ಪಿ) ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ

ಹಾಗೂ ವಿದ್ಯುನ್ಮಾನ ಮಾಧ್ಯಮ ಸ್ನಾತಕೋತ್ತರ ಪದವೀಧರರಿಗೆ ವೃತ್ತಿಯಲ್ಲಿ ಉತ್ತಮ ಕಾರ್ಯನಿರ್ವಹಿಸಲು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಮೂರು ತಿಂಗಳ ಅಪ್ರೆಂಟಿಸ್ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

ಪರಿಶಿಷ್ಟ ಜಾತಿಯ 25 ಮಂದಿ ಹಾಗೂ ಪರಿಶಿಷ್ಟ ಪಂಗಡದ 10 ಮಂದಿ ಅಭ್ಯರ್ಥಿಗಳನ್ನು ಗರಿಷ್ಠ ಅಂಕಗಳ ಆಧಾರದ ಮೇಲೆ ಹಾಗೂ ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಪತ್ರಿಕಾಲಯ / ವಾಹಿನಿಗಳಲ್ಲಿ ತರಬೇತಿ ನೀಡಿ ಮಾಹೆಯಾನ ರೂ. 15,000/- ಗಳ ಸ್ಟೈಫಂಡ್ ನೀಡಲಾಗುವುದು.

ಅಭ್ಯರ್ಥಿಯು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದಿರಬೇಕು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿದ್ದು ಕನ್ನಡ ಭಾಷೆಯಲ್ಲಿ ಪರಿಣಿತರಾಗಿರಬೇಕು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ದಿನಾಂಕದಂದು ಅಭ್ಯರ್ಥಿಗಳ ವಯಸ್ಸು 40 ವರ್ಷದೊಳಗಿರಬೇಕು.

ಅರ್ಜಿಯೊಂದಿಗೆ ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಪದವಿ ಮತ್ತು ಸ್ನಾತಕೋತ್ತರ ಪದವಿ ಪ್ರಮಾಣ ಪತ್ರಗಳೊಂದಿಗೆ ಜಾತಿ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಹಾಗೂ ಇನ್ನಿತರೆ ಪೂರಕ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಇ-ಮೇಲ್ ವಿಳಾಸ traineekma2020@gmail.com ಮೂಲಕ ಅಥವಾ ಅಂಚೆ ಮೂಲಕ ದಿನಾಂಕ : 27-11-2020 ರ ಒಳಗೆ ತಲುಪುವಂತೆ ಕಳುಹಿಸಬೇಕು.

ಈ ಹಿಂದೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಮಾಧ್ಯಮ ಅಕಾಡೆಮಿ ಸೇರಿದಂತೆ ಯಾವುದೇ ಸರ್ಕಾರಿ ಇಲಾಖೆ/ಸಂಸ್ಥೆಗಳಲ್ಲಿ ಫಲಾನುಭವಿಗಳಾಗಿದ್ದರೆ ಅಂತಹವರು ಅರ್ಜಿ ಸಲ್ಲಿಸುವಂತಿಲ್ಲ. ಸರ್ಕಾರದಿಂದ ಈಗಾಗಲೇ ಸೌಲಭ್ಯ ಪಡೆದ ಅಭ್ಯರ್ಥಿಗಳು ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದಲ್ಲಿ ಅವರ ಅರ್ಜಿಯನ್ನು ತಿರಸ್ಕರಿಸಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮ್ಮೆ ಹೂಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 080-22860164 ಕಾರ್ಯದರ್ಶಿಗಳು, ಕರ್ನಾಟಕ ಮಾಧ್ಯಮ ಅಕಾಡೆಮಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ.ಅಂಬೇಡ್ಕರ್ ವೀಧಿ, ಬೆಂಗಳೂರು-560001 ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧಿಕೃತ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷಾ ವೇಳಾಪಟ್ಟಿ ಪ್ರಕಟ

ಬೆಂಗಳೂರು, ನವೆಂಬರ್ 09 (ಕರ್ನಾಟಕ ವಾರ್ತೆ): ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚಿಸಲಾದ ವಿವಿಧ ವೃಂದದ ಹುದ್ದೆಗಳ ನೇಮಕಾತಿ ಸಂಬಂಧ ಪರೀಕ್ಷೆಗಳ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

ಕರ್ನಾಟಕ ರಾಜ್ಯ ಲೆಕ್ಕಪರಿಶೋದನೆ ಮತ್ತು ಲೆಕಪ್ಪರ ಇಲಾಖೆಯಲ್ಲಿನ ಸಮೂಹ 'ಎ' ವೃಂದದ ಸಹಾಯಕ ನಿಯಂತ್ರಕರ ಹುದ್ದೆಗಳು (ಮುಖ್ಯ ಪರೀಕ್ಷೆ) 2020 ಡಿಸೆಂಬರ್ 21 ರಿಂದ ಡಿಸೆಂಬರ್ 24ರ ವರೆಗೆ. ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು 'ಬಿ' ವೃಂದದ ಹುದ್ದೆಗಳ ಮುಖ್ಯ ಪರೀಕ್ಷೆ 2021 ಜನವರಿ 2 ರಿಂದ ಜನವರಿ 5ರವರೆಗೆ.

ರಾಜ್ಯದ ವಿವಿಧ ಇಲಾಖೆಗಳಲ್ಲಿನ ಮತ್ತು ಕರ್ನಾಟಕ ಭವನ ದೆಹಲಿಯ ಉಳಿಕೆ ಮೂಲ ವೃಂದದ ಮತ್ತು ಹೈದ್ರಾಬಾದ ಕರ್ನಾಟಕ ವೃಂದದ ಸಹಾಯಕರು ಮತ್ತು ಪ್ರಥಮ ದರ್ಜೆ ಸಹಾಯಕರುಗಳ ಹುದ್ದೆಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಜನವರಿ 23, 2020. ಸ್ಪರ್ಧಾತ್ಮಕ ಪರೀಕ್ಷೆ ಜನವರಿ 24, 2020.

ಕರ್ನಾಟಕ ರಾಜ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿನ ಸಮೂಹ 'ಎ' ವೃಂದದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಹುದ್ದೆಗಳ ಮುಖ್ಯ ಪರೀಕ್ಷೆ ಜನವರಿ 27, 2020 ರಿಂದ ಜನವರಿ 30ರ ವರೆಗೆ. ರಾಜ್ಯ ವಿವಿಧ ಇಲಾಖೆಗಳಲ್ಲಿನ ಉಳಿಕೆ ಮೂಲ ವೃಂದದ ಮತ್ತು ಹೈದ್ರಾಬಾದ್ ಕರ್ನಾಟಕ ವೃಂದದ ಕಿರಿಯ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ಫೆಬ್ರವರಿ 13 ರಂದು ಹಾಗೂ ಸ್ಪರ್ಧಾತ್ಮಕ ಪರೀಕ್ಷೆ ಫೆಬ್ರವರಿ 14 ರಂದು ನಡೆಯಲಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪೊಲೀಸ್ ಇಲಾಖೆಗೆ ನ. 11 ರಂದು 751 ದ್ವಿಚಕ್ರವಾಹನಗಳ ಹಸ್ತಾಂತರ

ಬೆಂಗಳೂರು, ನವೆಂಬರ್ 09 (ಕರ್ನಾಟಕ ವಾರ್ತೆ): ನಿರ್ಭಯ ಯೋಜನೆಯಡಿ ಸಾರ್ವಜನಿಕ ಸೇವೆಗಾಗಿ ರಾಜ್ಯ ಪೊಲೀಸ್ ಇಲಾಖೆಗೆ 751 ದ್ವಿ-ಚಕ್ರ ವಾಹನಗಳನ್ನು ಮೇ 11 ರಂದು ಬೆಳಿಗ್ಗೆ 10.30 ಗಂಟೆಗೆ ಬೆಂಗಳೂರು ವಿಧಾನಸೌಧದ ಬೃಹತ್ ಮೆಟ್ಟಿಲುಗಳ ಬಳಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವರು ಪೊಲೀಸ್ ಇಲಾಖೆಗೆ ಹಸ್ತಾಂತರ ಮಾಡುವರು.

ಸಮಾರಂಭದ ಅತಿಥಿಗಳಾಗಿ ಗೃಹ ಸಚಿವ ಬಸವರಾಜ ಬೊಮ್ಮಾಯಿ ಉಪಸ್ಥಿತರಿರುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.